**APRIL 11, 2026**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

## ಮುಖ್ಯಾಂಶಗಳು

- **ಗ್ರಾಮೀಣ ಕುಡಿಯುವ ನೀರು** ಪೂರೈಕೆಯಲ್ಲಿ ಲೋಪಗಳಾಗದಂತೆ ಮುಂಜಾಗ್ರತಾ ಕ್ರಮಕ್ಕೆ ಗ್ರಾಮೀಣಾಭಿವೃದ್ಧಿ ಸಚಿವರ ಸೂಚನೆ.

- **ಖಾಸಗಿ ಇಂಧನ ಕಂಪನಿಗಳ** ಮುಖ್ಯಸ್ಥರೊಂದಿಗೆ ಆಹಾರ ಇಲಾಖೆ ಸಚಿವರ ಮಹತ್ವದ ಸಭೆ: ಎಲ್.ಪಿ.ಜಿ ಗ್ಯಾಸ್ ದರ ನಿಯಂತ್ರಣ ಕುರಿತು ಕಟ್ಟುನಿಟ್ಟಿನ ಸೂಚನೆ.

- **ಕಾರ್ಮಿಕರಿಗೆ ಲಭ್ಯವಾಗುವ** ಇಎಸ್ಐ ಸೌಲಭ್ಯಗಳನ್ನು ಬಲಪಡಿಸುವಂತೆ ಆರೋಗ್ಯ ಸಚಿವ ದಿನೇಶ ಗುಂಡೂರಾವ್ ನಿರ್ದೇಶನ.

- **ರಾಜ್ಯದಲ್ಲಿ ಅಪೌಷ್ಟಿಕತೆ** ಮುಕ್ತ ಅಭಿಯಾನಕ್ಕೆ ಚಾಲನೆ: 119 ಪೌಷ್ಟಿಕ ಪುನಶ್ಚೇತನ ಕೇಂದ್ರಗಳ ಮೂಲಕ ಮಕ್ಕಳಿಗೆ ಮರುಜೀವ

## ಈಗ ವಾರ್ತೆಗಳ ವಿವರ

*******

**ಬೇಸಿಗೆ ಅವಧಿಯಲ್ಲಿ** ಗ್ರಾಮೀಣ ಕುಡಿಯುವ ನೀರು ಸರಬರಾಜಿನಲ್ಲಿ ಯಾವ ಲೋಪಗಳು ಉಂಟಾಗದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು ಎಂದು ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ ಖರ್ಗೆ ಸೂಚಿಸಿದ್ದಾರೆ. ಎಲ್ಲಾ ಜಿಲ್ಲಾ ಪಂಚಾಯತಿ ಸಿಇಒಗಳೊಂದಿಗೆ ಸಭೆ ನಡೆಸಿದ ಅವರು, ರಾಜ್ಯದಲ್ಲಿ ದುರಸ್ತಿಯಾಗಬೇಕಾಗಿರುವ ಶುದ್ಧ ನೀರಿನ ಘಟಕಗಳನ್ನು ಈ ವ ೯ ಆದ್ಯತೆಯ ಮೇಲೆ ಸರಿಪಡಿಸಲು ಉದ್ದೇಶಿಸಿದ್ದು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ವೈಜ್ಞಾನಿಕ ರೀತಿಯಲ್ಲಿ ಅಧ್ಯಯನ ಮಾಡಿ ವರದಿ ಸಿದ್ಧಪಡಿಸಿ ಕಳುಹಿಸಬೇಕು ಎಂದರು. ಕುಡಿಯುವ ನೀರಿನ ಸಮಸ್ಯೆ ಕುರಿತು ದೂರು ಸಲ್ಲಿಸುವ ಜನಪ್ರತಿನಿಧಿಗಳು ಹಾಗೂ ಸಾರ್ವಜನಿಕರ ಸಮಸ್ಯೆಗಳನ್ನು ಆಲಿಸಿ ಅವರಿಗೆ ಉತ್ತರ ನೀಡುವ ಮೂಲಕ ಅಧಿಕಾರಿಗಳು ಉತ್ತರದಾಯಿಗಳಾಗಬೇಕು, ತಾಲ್ಲೂಕು ಮಟ್ಟದಲ್ಲಿ ನೀರಿನ ಸಮಸ್ಯೆಗಳನ್ನು ಆಲಿಸುವ ಸಹಾಯವಾಣಿ ತೆರೆಯಬೇಕು ಎಂದು ಸಚಿವರು ಸೂಚಿಸಿದರು.

*******

**ಹಾವೇರಿ ಜಿಲ್ಲೆಗೆ ಹೊಸದಾಗಿ** ನರ್ಸಿಂಗ್ ಕಾಲೇಜು ಮಂಜೂರಾಗಿದ್ದು, ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಆವರಣದಲ್ಲಿ ಕಾಲೇಜು ನಿರ್ಮಾಣ ಮಾಡಲಾಗುವುದು ಎಂದು ಹಾವೇರಿ ಜಿಲ್ಲಾ ಉಸ್ತುವಾರಿ ಸಚಿವ ಶಿವಾನಂದ ಪಾಟೀಲ ಹೇಳಿದ್ದಾರೆ. ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಹಾವೇರಿ ಜಿಲ್ಲಾ ಯೋಜನಾ ಸಮಿತಿ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಎಂ.ಐ.ಆರ್.ಯಂತ್ರೋಪಕರಣ ಇನ್ನೊಂದು ತಿಂಗಳಿಗೆ ಜಿಲ್ಲೆಗೆ ಬರಲಿದ್ದು, ಅದನ್ನು ಜಿಲ್ಲಾ ಆಸ್ಪತ್ರೆಯಲ್ಲಿ ಅಳವಡಿಸಲಾಗುವುದು. ಸರ್ಕಾರಿ ಆಸ್ಪತ್ರೆಗಳಲ್ಲಿ ಸಹಜ ಹೆರಿಗೆ ಆದ್ಯತೆ ನೀಡಬೇಕು ಎಂದು ಸೂಚಿಸಿದರು. ಬೇಸಿಗೆ ಕಾಲವಾಗಿರುವುದರಿಂದ ಕುಡಿಯುವ ನೀರು ಪೂರೈಕೆಗೆ ಆದ್ಯತೆ ಕೊಡಬೇಕು. ಹಾವೇರಿ ನಗರದಲ್ಲಿ 10 ದಿನಗಳಿಗೊಮ್ಮೆ ನೀರು ಪೂರೈಕೆಯಾಗುತ್ತಿರುವ ಕುರಿತು ದೂರುಗಳಿದ್ದು, ಸಂಬಂಧಪಟ್ಟ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸುವ ಮೂಲಕ ಸಮರ್ಪಕ ನೀರು ಪೂರೈಕೆಗೆ ಕ್ರಮ ಕೈಗೊಳ್ಳಬೇಕು ಎಂದು ಸಚಿವರು ಹೇಳಿದರು. .

*******

**ರಾಜ್ಯ ಆಹಾರ ಸಚಿವ ಕೆ.ಎಚ್.** ಮುನಿಯಪ್ಪ ಅವರು ಖಾಸಗಿ ಇಂಧನ ಕಂಪನಿಗಳ ಮುಖ್ಯಸ್ಥರೊಂದಿಗೆ ನಿನ್ನೆ ಬೆಂಗಳೂರಿನಲ್ಲಿ ಮಹತ್ವದ ಸಭೆ ನಡೆಸಿ, ಎಲ್.ಪಿ.ಜಿ ಗ್ಯಾಸ್ ದರ ನಿಯಂತ್ರಣ ಕುರಿತು ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಿದರು. ಮಾರುಕಟ್ಟೆಯಲ್ಲಿ ಗ್ರಾಹಕರೇ ಪ್ರಮುಖರಾಗಿದ್ದು, ಇಂತಹ ಸಂಕ ್ಟದ ಪರಿಸ್ಥಿತಿಯಲ್ಲಿ ದರ ಹೆಚ್ಚಿಸುವುದು ಸರಿಯಲ್ಲ. ಸರ್ಕಾರ ನಿಗದಿಪಡಿಸಿದ ದರಗಳನ್ನು ಕಂಪೆನಿಗಳು ಕಟ್ಟುನಿಟ್ಟಾಗಿ ಪಾಲಿಸಬೇಕು. ದರಗಳಲ್ಲಿ ಏಕರೂಪತೆ ಕಾಪಾಡುವ ಬಗ್ಗೆ ಕಂಪನಿಗಳೊಂದಿಗೆ ಚರ್ಚಿಸಿ, ಗ್ರಾಹಕರ ಹಿತಾಸಕ್ತಿಯನ್ನು ಪ್ರಾಮುಖ್ಯತೆಯಾಗಿ ಪರಿಗಣಿಸಬೇಕು ಎಂದು ಸಚಿವರು ಸೂಚಿಸಿದರು.

*******

**ಖಾಸಗಿ ಕಂಪನಿಗಳ ಎಲ್.ಪಿ.ಜಿ.** ಗ್ಯಾಸ್ ಸರಬರಾಜು ಕುರಿತು, ಕೇಂದ್ರ ನವೀಕರಿಸಬಹುದಾದ ಇಂಧನ ಖಾತೆ ಸಚಿವ ಪ್ರಲ್ಹಾದ ಜೋಶಿ ಅವರು ವೀಡಿಯೋ ಕಾನ್ಫರೆನ್ಸ್ ಮೂಲಕ ತುರ್ತು ಸಭೆ ನಡೆಸಿದರು. ಧಾರವಾಡ ಜಿಲ್ಲಾಧಿಕಾರಿ, ಪೋಲಿಸ್ ಆಯುಕ್ತರು, ಪಾಲಿಕೆ ಆಯುಕ್ತರು, ಆಟೋ ಸಂಘದ ಪದಾಧಿಕಾರಿಗಳು ಮತ್ತು ಜಿಲ್ಲಾಡಳಿತದ ಅಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಎಲ್.ಪಿ.ಜಿ ಗ್ಯಾಸ್ ಸರಬರಾಜಿನಲ್ಲಿ ಆಗುತ್ತಿರುವ ತೊಂದರೆಗಳ ಕುರಿತು ಚರ್ಚಿಸಲಾಯಿತು. ಎಲ್.ಪಿ.ಜಿ ಸರಬರಾಜು ಮೇಲ್ವಿಚಾರಣೆಗಾಗಿ ಒಬ್ಬ ನೋಡಲ್ ಅಧಿಕಾರಿಯನ್ನು ನಿಯುಕ್ತಿಗೊಳಿಸಿ, ಅವರಿಗೆ ಸರಬರಾಜಿನ ಮೇಲ್ವಿಚಾರಣೆ ಹಾಗೂ ಸಮನ್ವಯ ಸಾಧಿಸುವ ಜವಾಬ್ದಾರಿ ನೀಡುವಂತೆ, ಆಟೋ ಚಾಲಕರಿಗೆ ಎಲ್.ಪಿ.ಜಿ ಗ್ಯಾಸ ದೊರೆಯುವ ನಿಟ್ಟಿನಲ್ಲಿ ಯಾವುದೇ ತೊಂದರೆಯಾಗದಂತೆ ನೋಡಿಕೊಳ್ಳಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸಚಿವ ಪ್ರಲ್ಹಾದ ಜೋಶಿ ಸೂಚಿಸಿದರು.

*******

**ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಜನರ ಬಳಿ ಬಂದು** ಸಮಸ್ಯೆ ಆಲಿಸಿ, ಪರಿಹಾರ ಕಲ್ಪಿಸಿ ಕೊಡುವುದು ಜನಸ್ಪಂದನ ಕಾರ್ಯಕ್ರಮದ ಉದ್ದೇಶ ಎಂದು ಕಂದಾಯ ಸಚಿವ ಕೃ ್ಣಬೈರೇಗೌಡ ಹೇಳಿದ್ದಾರೆ. ಹಾಸನ ಜಿಲ್ಲೆಯ ಬೇಲೂರಿನಲ್ಲಿ ತಾಲೂಕು

ಮಟ್ಟದ ಜನ ಸ್ಪಂದನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಈಗ ಅಧಿಕಾರಿಗಳು, ಆಡಳಿತ ಯಂತ್ರ ಜನರತ್ತ ಬರುತ್ತಿರುವುದರಿಂದ ಮಧ್ಯವರ್ತಿಗಳ ಹಾವಳಿ ತಡೆಯಲು ಸಾಧ್ಯವಾಗಿದೆ ಎಂದು ಅವರು ಹೇಳಿದರು.

*******

**ಕಾರ್ಮಿಕರಿಗೆ ಲಭ್ಯವಾಗುವ** ವೈದ್ಯಕೀಯ ಸೌಲಭ್ಯಗಳು ಸುಗಮವಾಗಿ ತಲುಪುವಂತೆ ಕ್ರಮ ಕೈಗೊಳ್ಳುವ ಅಗತ್ಯವಿದೆ ಎಂದು ಆರೋಗ್ಯ ಸಚಿವ ದಿನೇಶ ಗುಂಡೂರಾವ್ ಹೇಳಿದ್ದಾರೆ. ಮಂಗಳೂರಿನಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಇಎಸ್‌ಐ ಅಧಿಕಾರಿಗಳೊಂದಿಗೆ ನಡೆಸಿದ ಸಭೆಯಲ್ಲಿ ಮಾತನಾಡಿದ ಅವರು, ಇಎಸ್‌ಐ ಇಲಾಖೆಯ ಕಾರ್ಯವೈಖರಿಯನ್ನು ಇನ್ನ ಷ್ಟು ಬಲಪಡಿಸುವ ಅಗತ್ಯವಿದ್ದು, ಯೋಜನೆಗಳ ಜಾರಿಗೆ ವೇಗ ಹೆಚ್ಚಿಸಿ ಫಲಾನುಭವಿಗಳಿಗೆ ಸಮಯಕ್ಕೆ ಸರಿಯಾಗಿ ಸೇವೆಗಳು ದೊರೆಯುವಂತೆ ನೋಡಿಕೊಳ್ಳಬೇಕು ಎಂದರು.

*******

**ಚಿಕ್ಕಬಳ್ಳಾಪುರ ಜಿಲ್ಲೆ ಚಿಂತಾಮಣಿ ನಗರವನ್ನು** ಯೋಜನಾ ಬದ್ಧವಾಗಿ ಅಭಿವೃದ್ಧಿ ಪಡಿಸಲು ನಗರಾಭಿವೃದ್ಧಿ ಪ್ರಾಧಿಕಾರ ಅಸ್ತಿತ್ವಕ್ಕೆ ತರಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ ಹೇಳಿದ್ದಾರೆ. ಚಿಂತಾಮಣಿಯ ಸಾಮರ್ಥ್ಯ ಸೌಧದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಕಚೇರಿ ಉದ್ಘಾಟಿಸಿ ಮಾತನಾಡಿದ ಅವರು, ಚಿಂತಾಮಣಿ ನಗರವನ್ನು ಯೋಜನಾ ಬದ್ಧವಾಗಿ ನಿರ್ಮಿಸಲು ಹಾಗೂ ಹಲವು ಮೂಲ ಸೌಕರ್ಯಗಳನ್ನು ಒದಗಿಸಲು ನಗರಾಭಿವೃದ್ಧಿ ಪ್ರಾಧಿಕಾರ ರಚನೆಯಾಗಿದ್ದು, ನಗರದ ಸರ್ವತೋಮುಖ ಬೆಳವಣಿಗೆ ಮತ್ತು ಅಭಿವೃದ್ಧಿ ಹಿನ್ನೆಲೆಯಲ್ಲಿ 40–50 ವ ರ್ಷಗಳ ದೂರದೃಷ್ಟಿಯನ್ನು ಇಟ್ಟುಕೊಂಡು ಈ ಪ್ರಾಧಿಕಾರ ಅಸ್ತಿತ್ವಕ್ಕೆ ಬಂದಿದೆ ಎಂದು ಸಚಿವರು ಹೇಳಿದರು.

*******

**ಈಗ ಪ್ರಕಟಣೆ ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..**

**ಪ್ರಕಟಣೆ–42 ಸೆಕೆಂಡ್ಸ್**

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ**

*******

**ಮಕ್ಕಳಲ್ಲಿ ಕಂಡುಬರುತ್ತಿರುವ** ತೀವ್ರ ಅಪೌಷ್ಟಿಕತೆ ಹೋಗಲಾಡಿಸಲು ಆರೋಗ್ಯ ಇಲಾಖೆ ಸಮರೋಪಾದಿಯಲ್ಲಿ ಕಾರ್ಯಪ್ರವೃತ್ತವಾಗಿದ್ದು, ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ರಾಜ್ಯಾದ್ಯಂತ ಒಟ್ಟು 119 ಪೌಷ್ಟಿಕ ಪುನಶ್ಚೇತನ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. ಹಿಂದೆ ಜಿಲ್ಲಾ ಮಟ್ಟಕ್ಕೆ ಸೀಮಿತವಾಗಿದ್ದ ಈ ಕೇಂದ್ರಗಳು, ಈಗ ಹಂತ ಹಂತವಾಗಿ ತಾಲ್ಲೂಕು ಮಟ್ಟಕ್ಕೂ ವಿಸ್ತರಿಸಲ್ಪಟ್ಟಿವೆ. ಜಿಲ್ಲಾ ಮಟ್ಟದಲ್ಲಿ 33 ಕೇಂದ್ರಗಳು ಸುಸಜ್ಜಿತವಾಗಿ ಕಾರ್ಯನಿರ್ವಹಿಸುತ್ತಿವೆ. ರಾಜ್ಯದ ವಿವಿಧ ವಿಧಾನಸಭಾ ಕ್ಷೇತ್ರಗಳಲ್ಲಿ 5 ಹಾಸಿಗೆಗಳ ಸಾಮರ್ಥ್ಯವುಳ್ಳ 37 ಹೊಸ ತಾಲ್ಲೂಕು ಮಟ್ಟದ ಕೇಂದ್ರಗಳನ್ನು ಇತ್ತೀಚೆಗೆ ಪ್ರಾರಂಭಿಸಲಾಗಿದ್ದು, ಇದರೊಂದಿಗೆ ರಾಜ್ಯದ ಒಟ್ಟು ಪೌಷ್ಟಿಕ ಕೇಂದ್ರಗಳ ಸಂಖ್ಯೆ 119 ಕ್ಕೆ ಏರಿಕೆಯಾಗಿದೆ. ತೀವ್ರ ಅಪೌಷ್ಟಿಕತೆಯಿಂದ ಬಳಲುತ್ತಿರುವ ಮಕ್ಕಳನ್ನು ಈ ಆರೈಕೆ ಕೇಂದ್ರಗಳಲ್ಲಿ ದಾಖಲಿಸಿಕೊಂಡು ವೈದ್ಯಕೀಯ ಚಿಕಿತ್ಸೆ ನೀಡಲಾಗುತ್ತದೆ.

*******

**'ನಾರಿ ಶಕ್ತಿ ವಂದನ್ ಅಧಿನಿಯಮ' ಲೋಕಸಭೆ ಮತ್ತು ರಾಜ್ಯ**ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಶೇಕಡಾ 33 ರಷ್ಟು ಮೀಸಲಾತಿಯನ್ನು ಖಚಿತಪಡಿಸುವ ಮೂಲಕ ಭಾರತದಲ್ಲಿ ಮಹಿಳಾ ಸಬಲೀಕರಣದತ್ತ ಒಂದು ಐತಿಹಾಸಿಕ ಹೆಜ್ಜೆಯನ್ನು ಗುರುತಿಸಿದೆ. ನಾರಿ ಶಕ್ತಿ ವಂದನಾ ಅಧಿನಿಯಮ ರಾಜಕೀಯ ಮೀಸಲಾತಿಗಾಗಿ ಇರುವ ಅವಕಾಶವಾಗಿದ್ದು, ಮಹಿಳೆಯರು ರಾಜಕೀಯದಲ್ಲಿ ಪ್ರವೇಶಿಸಿ ಪ್ರಮುಖ ರಾಜಕೀಯ ನಿರ್ಧಾರಗಳನ್ನು ತೆಗೆದುಕೊಳ್ಳಲು ಇದು ಸಹಕಾರಿಯಾಗಿದೆ. ಈ ಕುರಿತು ವಿಜಯನಗರ ಜಿಲ್ಲಾ ಬಿಜೆಪಿ ಘಟಕದ ಅಧ್ಯಕ್ಷರಾದ ಸಂಜೀವರೆಡ್ಡಿ ಆಕಾಶವಾಣಿಯೊಂದಿಗೆ ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.

**ಧ್ವನಿ-ಸಂಜೀವರೆಡ್ಡಿ- 45 ಸೆಕೆಂಡ್ಸ್**

*******

**ಉಡುಪಿ ಜಿಲ್ಲೆಯ ಪ್ರವಾಸೋದ್ಯಮ** ಪ್ರಚಾರಕ್ಕೆ ಡಿಜಿಟಲ್ ಸ್ಪರ್ಶದ ಗುರಿ ನೀಡಲು ಉದ್ದೇಶಿಸಲಾಗಿದೆ ಎಂದು ಜಿಲ್ಲಾಧಿಕಾರಿ ಸ್ವರೂಪಾ ಟಿ.ಕೆ ಹೇಳಿದ್ದಾರೆ. ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಈ ವಿಷಯ ತಿಳಿಸಿದ ಅವರು, ಉಡುಪಿಯ ಕ್ರಿಯೇಟರ್ಸ್ ಲ್ಯಾಬ್ ಸಂಸ್ಥೆ ರಾಷ್ಟ್ರೀಯ ಮಟ್ಟದಲ್ಲಿ ಡಿಜಿಟಲ್ ಕಂಟೆಂಟ್‌ಗಳನ್ನು ತಯಾರಿಸುತ್ತಿದೆ. ಇದರಲ್ಲಿ ವಿದ್ಯಾರ್ಥಿಗಳು, ಕಂಟೆಂಟ್ ಕ್ರಿಯೇಟರ್ಸ್ ಭಾಗವಹಿಸಿ ಜಿಲ್ಲೆಯ ಪ್ರೇಕ್ಷಣೀಯ ಸ್ಥಳಗಳ ಬಗ್ಗೆ ಮಾಹಿತಿ ನೀಡುವ ಫೋಟೋ ಮತ್ತು ವೀಡಿಯೋಗಳನ್ನು ಹಂಚಿಕೊಳ್ಳುವ ಅವಕಾಶ ಇದೆ. ವಿಶೇ ‍ವಾಗಿ ಕಾಲೇಜು ಮಟ್ಟದಲ್ಲಿ ಲ್ಯಾಬ್‌ಗಳನ್ನು ಅಳವಡಿಸಿ ಶೈಕ್ಷಣಿಕ ಸಂಸ್ಥೆಗಳ ಸಹಭಾಗಿತ್ವದಲ್ಲಿ ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡಲಾಗುವುದು ಎಂದು ಜಿಲ್ಲಾಧಿಕಾರಿ ಹೇಳಿದರು.

*******

**ಇದೇ 23 ರಿಂದ ಮೇ 22** ರವರೆಗೆ ಧಾರವಾಡ ಜಿಲ್ಲೆಯ ಎಲ್ಲ ದನ ಹಾಗೂ ಎಮ್ಮೆಗಳಿಗೆ ಕಾಲುಬಾಯಿ ಜ್ವರ ಲಸಿಕೆ ಹಾಕುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್., ತಿಳಿಸಿದ್ದಾರೆ. ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕಾಲುಬಾಯಿ ರೋಗ ನಿಯಂತ್ರಣ ಕಾರ್ಯಕ್ರಮದ ಒಂಬತ್ತನೇಯ ಜಿಲ್ಲಾ ಮೇಲುಸ್ತುವಾರಿ ಸಮಿತಿ ಸಭೆಯಲ್ಲಿ ಅವರು ಮಾತನಾಡಿದರು.

*******

**ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು**

- **ಗ್ರಾಮೀಣ ಕುಡಿಯುವ ನೀರು** ಪೂರೈಕೆಯಲ್ಲಿ ಲೋಪಗಳಾಗದಂತೆ ಮುಂಜಾಗೃತಾ ಕ್ರಮಕ್ಕೆ ಗ್ರಾಮೀಣಾಭಿವೃದ್ಧಿ ಸಚಿವರ ಸೂಚನೆ.

- **ಖಾಸಗಿ ಇಂಧನ ಕಂಪನಿಗಳ** ಮುಖ್ಯಸ್ಥರೊಂದಿಗೆ ಆಹಾರ ಇಲಾಖೆ ಸಚಿವರ ಮಹತ್ವದ ಸಭೆ: ಎಲ್.ಪಿ.ಜಿ ಗ್ಯಾಸ್ ದರ ನಿಯಂತ್ರಣ ಕುರಿತು ಕಟ್ಟುನಿಟ್ಟಿನ ಸೂಚನೆ.

- **ಕಾರ್ಮಿಕರಿಗೆ ಲಭ್ಯವಾಗುವ** ಇಎಸ್ಐ ಸೌಲಭ್ಯಗಳನ್ನು ಬಲಪಡಿಸುವಂತೆ ಆರೋಗ್ಯ ಸಚಿವ ದಿನೇಶ ಗುಂಡೂರಾವ್ ಸೂಚನೆ.

- **ರಾಜ್ಯದಲ್ಲಿ ಅಪೌಷ್ಟಿಕತೆ** ಮುಕ್ತ ಅಭಿಯಾನಕ್ಕೆ ಚಾಲನೆ: 119 ಪೌಷ್ಟಿಕ ಪುನಶ್ಚೇತನ ಕೇಂದ್ರಗಳ ಮೂಲಕ ಮಕ್ಕಳಿಗೆ ಮರುಜೀವ

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು**
**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ**
******END******